**All India Radio: Bangalore**
**Regional Bulletin In Kannada**
**26.06.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**26.06.2025 / 6.40 p.m.**
**<><><><>**

ಮುಖ್ಯಾಂಶಗಳು

**<><><><>**

**೧. ಬಾಹ್ಯಾಕಾಶ ಕೇಂದ್ರ ತಲುಪಿದ ಶುಭಾಂಶು ಶುಕ್ಲ - ಧಾರವಾಡದ ಹೆಸರುಕಾಳು, ಮೆಂತೆ ಬಗ್ಗೆ ಸಂಶೋಧನೆ**

**೨. ಮಲೆ ಮಹದೇಶ್ವರ ಅರಣ್ಯದಲ್ಲಿ ೪ ಹುಲಿಗಳ ಅಸಹಜ ಸಾವು ; ತನಿಖೆಗೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಆದೇಶ**

**೩. ರಾಜ್ಯದಲ್ಲಿ ಮಾದಕ ವಸ್ತುಗಳ ನಿಯಂತ್ರಣಕ್ಕೆ ಮತ್ತಷ್ಟು ಕಠಿಣ ಕ್ರಮ ; ಗೃಹ ಸಚಿವ ಡಾ. ಜಿ. ಪರಮೇಶ್ವರ್**

**೪. ರಾಜ್ಯದಲ್ಲಿ ೧೫ ಬಗೆಯ ಔಷಧಗಳು, ಸೌಂದರ್ಯ ವರ್ಧಕಗಳ ಸಂಗ್ರಹ, ಮಾರಾಟ, ಬಳಕೆಗೆ ನಿಷೇಧ**

**೫. ನಾಳೆ ಮೊದಲನೇ ಆಷಾಢ ಶುಕ್ರವಾರ ; ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ಬಿಗಿ ಭದ್ರತೆ**

**<><><><>**

ಭಾರತದ ಶುಭಾಂಶು ಶುಕ್ಲ ಸೇರಿದಂತೆ ನಾಲ್ವರು ಗಗನಯಾತ್ರಿಗಳು ಅಂತಾರಾಷ್ಟ್ರೀಯ ಬಾಹ್ಯಕಾಶ ಕೇಂದ್ರ ತಲುಪಿದ್ದಾರೆ. ಈ ಮೂಲಕ ಶುಭಾಂಶು ಶುಕ್ಲ ಗಗನಯಾನ ಯಾತ್ರೆ ಕೈಗೊಂಡ ಎರಡನೇ ಭಾರತೀಯರಾಗಿದ್ದಾರೆ. ನಾಲ್ವರು ಗಗನಯಾತ್ರಿಗಳನ್ನು ಹೊತ್ತೊಯ್ದಿದ್ದ ಸ್ಪೇಸ್ ಎಕ್ಸ್‌ನ ಡ್ರ್ಯಾಗನ್ ನೌಕೆ ಯಶಸ್ವಿಯಾಗಿ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಡಾಕ್ ಆಗಿದೆ.

ಬಾಹ್ಯಾಕಾಶದ ಹಾದಿಯಲ್ಲಿ ಎಲ್ಲವನ್ನು ಮಗುವಿನಂತೆ ಕಲಿಯುತ್ತಿದ್ದೇನೆ ಎಂದು ಗಗನಯಾತ್ರಿ ಶುಭಾಂಶು ಶುಕ್ಲ ಬಾಹ್ಯಾಕಾಶದಿಂದಲೇ ತಮ್ಮ ಸುಂದರ ಅನುಭವ ಹಂಚಿಕೊಂಡಿದ್ದಾರೆ.

ಈ ನಡುವೆ ಈ ಬಾಹ್ಯಾಕಾಶ ಯಾನಕ್ಕೂ ಧಾರವಾಡದ ಕೃಷಿ ವಿಶ್ವವಿದ್ಯಾಲಯಕ್ಕೂ ನಂಟಿರುವುದು ಬಹಿರಂಗಗೊಂಡಿದೆ. ಧಾರವಾಡದ ಹೆಸರು ಮತ್ತು ಮೆಂತ್ಯ ಕಾಳುಗಳನ್ನು ಬಾಹ್ಯಾಕಾಶಕ್ಕೆ ರವಾನಿಸಲಾಗಿದೆ. ಈ ಮೆಂತ್ಯಕಾಳುಗಳು ಬಾಹ್ಯಾಕಾಶದಲ್ಲಿ ಮೊಳಕೆಯೊಡೆದರೆ ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ಮೊಳಕೆಕಾಳುಗಳ ಮೇಲೆ ಸಂಶೋಧನೆ ನಡೆಯಲಿದೆ ಎಂದು ಕೃಷಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಪಿ.ಎಲ್ ಪಾಟೀಲ್ ಮಾಹಿತಿ ನೀಡಿದ್ದಾರೆ.

ಹೆಪ್ಪುಗಟ್ಟಿದ ಈ ಕಾಳುಗಳ ಬೀಜಗಳ ಮುಂದಿನ ೧೪ ದಿನಗಳಲ್ಲಿ ಧಾರವಾಡದ ಕೃಷಿ ವಿವಿಗೆ ಹಿಂತಿರುಗಿಸುವ ನಿರೀಕ್ಷೆಯಿದ್ದು, ಬಾಹ್ಯಾಕಾಶ ಆಧಾರಿತ ಪೌಷ್ಠಿಕಾಂಶ, ಸಂಶೋಧನೆ ನಡೆಯಲಿದೆ. ಈ ಸಂಶೋಧನೆಯನ್ನು ಐಐಟಿ-ಧಾರವಾಡದ ಅಸೋಸಿಯೇಟ್ ಪ್ರೊಫೆಸರ್ ಡಾ. ಸುಧೀರ್ ಸಿದ್ದಾಪುರರೆಡ್ಡಿ ಅವರ ಸಹಯೋಗದೊಂದಿಗೆ ನಡೆಯಲಿದೆ.

<><><>

ಮಲೆ ಮಹದೇಶ್ವರ ಬೆಟ್ಟದ ಅರಣ್ಯ ಪ್ರದೇಶದಲ್ಲಿ ಒಂದು ಹುಲಿ ಹಾಗೂ ಮೂರು ಮರಿಗಳು ಅಸಹಜವಾಗಿ ಸಾವಿಗೀಡಾಗಿದ್ದು, ಪಿಸಿಸಿಎಫ್ ನೇತೃತ್ವದ ತಂಡ ತನಿಖೆ ನಡೆಸಲಿದೆ ಎಂದು ಪರಿಸರ ಸಚಿವ ಈಶ್ವರ್ ಖಂಡ್ರೆ ಆದೇಶ ಹೊರಡಿಸಿದ್ದಾರೆ. ಮೂರು ದಿನಗಳಲ್ಲಿ ವರದಿ ಸಲ್ಲಿಸುವಂತೆ ಸೂಚಿಸಿದ್ದಾರೆ. ಈ ಘಟನೆ ಅರಣ್ಯ ಇಲಾಖೆ ಮತ್ತು ಪ್ರಾಣಿ ಪ್ರೇಮಿಗಳಲ್ಲಿ ಆತಂಕ ಉಂಟು ಮಾಡಿದ್ದು, ಕಿಡಿಗೇಡಿಗಳು ವಿಷಪ್ರಸನ ಮಾಡಿ ಸಾಯಿಸಿದ್ದಾರೆ ಎಂಬ ಶಂಕೆ ವ್ಯಕ್ತವಾಗಿದೆ. ಈ ಹಿನ್ನೆಲೆಯಲ್ಲಿ ಸಚಿವರು ತನಿಖೆಗೆ ಆದೇಶ ನೀಡಿದ್ದಾರೆ. ಚಾಮರಾಜನಗರ ಜಿಲ್ಲೆ ಹನೂರು ತಾಲೂಕು ವ್ಯಾಪ್ತಿಯ ವನ್ಯಧಾಮದಲ್ಲಿ ಅರಣ್ಯ ಸಿಬ್ಬಂದಿ ಬೀಟ್‌ಗೆ ತೆರಳಿದ್ದಾಗ ಹುಲಿಗಳು ಸಾವನ್ನಪ್ಪಿರುವುದು ಬೆಳಕಿಗೆ ಬಂದಿದೆ.

<><><>

ವಿದ್ಯಾರ್ಥಿಗಳಿಗೆ ಉಜ್ವಲ ಭವಿಷ್ಯವಿದ್ದು, ಮಾದಕ ವ್ಯಸನಕ್ಕೆ ಸಿಲುಕಿ ಜೀವನ ಹಾಳು ಮಾಡಿಕೊಳ್ಳಬೇಡಿ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ ಕರೆ ನೀಡಿದ್ದಾರೆ.

ಬೆಂಗಳೂರು ನಗರ ಪೊಲೀಸ್ ವತಿಯಿಂದ ನಗರದ ಕಂಠೀರವ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ 'ಅಂತಾರಾಷ್ಟ್ರೀಯ ಮಾದಕ ವ್ಯಸನ ಮತ್ತು ಅಕ್ರಮ ಕಳ್ಳ ಸಾಗಾಣಿಕೆ ವಿರೋಧಿ ದಿನ ಉದ್ಘಾಟಿಸಿ ಮಾತನಾಡಿದ ಅವರು, ಕಳೆದ ಒಂದು ವರ್ಷದಲ್ಲಿ ನಾಲ್ಕು ಸಾವಿರ ಕೆ.ಜಿ. ಗಾಂಜಾ ಸೇರಿದಂತೆ ೪೫ ಕೋಟಿ ರೂಪಾಯಿ ಮೌಲ್ಯದ ವಿವಿಧ ಬಗೆಯ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

ವಿದೇಶಿ ವಿದ್ಯಾರ್ಥಿಗಳು ಡ್ರಗ್ಸ್ ದಂಧೆಯಲ್ಲಿ ತೊಡಗುತ್ತಿದ್ದು, ೨೦೦ಕ್ಕೂ ಹೆಚ್ಚು ವಿದೇಶಿಗರನ್ನು ಗಡಿಪಾರು ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಮಾದಕ ವಸ್ತುಗಳ ನಿಯಂತ್ರಣಕ್ಕೆ ರಾಜ್ಯದಲ್ಲಿ ಮತ್ತಷ್ಟು ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಮಾದಕ ವಸ್ತುಗಳನ್ನು ಕುತೂಹಲಕ್ಕಾಗಿ ತೆಗೆದುಕೊಂಡರೆ ನಂತರ ಅದು ವ್ಯಸನವಾಗಿ ಪರಿವರ್ತಿತವಾಗುತ್ತದೆ ಎಂದು ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಲ್ ಶ್ರೀ ಹರಿಬಾಬು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದ್ದಾರೆ.

ಕೋಲಾರ ಜಿಲ್ಲೆಯಲ್ಲಿ ಪ್ರತಿ ಕಾಲೇಜಿನಲ್ಲಿ ಆಂಟಿ ಡ್ರಗ್ ಕಮಿಟಿಯನ್ನು ಸ್ಥಾಪಿಸುವ ಮೂಲಕ ನಶೆಮುಕ್ತ ಕೋಲಾರ ಜಿಲ್ಲೆಯನ್ನಾಗಿಸಲು ಎಲ್ಲರ ಸಹಕಾರ ಅಗತ್ಯವಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್. ಬಿ ತಿಳಿಸಿದ್ದಾರೆ.

ಧ್ವನಿ- ಪೊಲೀಸ್ ವರಿಷ್ಠಾಧಿಕಾರಿ ಬಿ.ನಿಖಿಲ್

ಅಂತಾರಾಷ್ಟ್ರೀಯ ಮಾದಕ ದ್ರವ್ಯ ವ್ಯಸನ ಮುಕ್ತ ದಿನದ ಅಂಗವಾಗಿ ಬಾಗಲಕೋಟೆ ಜಿಲ್ಲೆಯಾದ್ಯಂತ ವಿವಿಧ ಶಾಲಾ, ಕಾಲೇಜಿನ ೪ ಲಕ್ಷ ಮಕ್ಕಳಿಗೆ ಪ್ರತಿಜ್ಞಾವಿಧಿ ಬೋಧಿಸಲಾಯಿತು

<><><><>

ರಾಜ್ಯದಲ್ಲಿ ಮಾರಾಟವಾಗುವ ೧೫ ಬಗೆಯ ಔಷಧಗಳು ಹಾಗೂ ಸೌಂದರ್ಯ ವರ್ಧಕಗಳು ಪ್ರಾಮಾಣಿಕೃತ ಗುಣಮಟ್ಟದಲ್ಲಿ ಇಲ್ಲ ಎಂದು ಕರ್ನಾಟಕ ಔಷಧ ಪ್ರಯೋಗಾಲಯ ನಿಷೇಧಿಸಿ ಆದೇಶ ಹೊರಡಿಸಿದೆ.

ಎಲ್ಲ ಔಷಧ ಮಾರಾಟಗಾರರು, ವೈದ್ಯರು, ಆಸ್ಪತ್ರೆಗಳು ಮತ್ತು ನರ್ಸಿಂಗ್ ಹೋಂಗಳು ಈ ಉತ್ಪನ್ನಗಳನ್ನು ಸಂಗ್ರಹಿಸುವುದು ಹಾಗೂ ಮಾರಾಟ ಮಾಡುವುದನ್ನು ತಕ್ಷಣವೇ ನಿಲ್ಲಿಸಬೇಕೆಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸಾಮಾಜಿಕ ಜಾಲತಾಣದಲ್ಲಿ ಮನವಿ ಮಾಡಿದ್ದಾರೆ.

ನಿಯಮ ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><><><>

ಸರ್ಕಾರದ ಪರವಾಗಿ ಸಮಪರ್ಕವಾಗಿ ವಾದ ಮಾಡಲು ಹೆಚ್ಚುವರಿ ಅಡ್ವೊಕೇಟ್ ಜನರಲ್‌ಗಳ ಸಂಖ್ಯೆಯನ್ನು ಹೆಚ್ಚಿಸಲಾಗಿದೆ. ಪರಿಣಾಮಕಾರಿಯಾಗಿ ಕರ್ತವ್ಯ ನಿರ್ವಹಿಸದಿದ್ದರೆ ಬದಲಾಯಿಸುವುದು ಅನಿವಾರ್ಯವಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ ನೀಡಿದ್ದಾರೆ.

ವಿಧಾನಸೌಧದಲ್ಲಿಂದು ಹೆಚ್ಚುವರಿ ಅಡ್ವೊಕೇಟ್ ಜನರಲ್‌ಗಳ ಕಾರ್ಯನಿರ್ವಹಣಾ ಸಭೆ ನಡೆಸಿ ಮಾತನಾಡಿದ ಅವರು, ಕರ್ನಾಟಕ ರಾಜ್ಯ ಅಧಿನಿಯಮಗಳ ಸಂಪೂರ್ಣ ಅನುಷ್ಠಾನ ಉದ್ದೇಶದ ನಿರ್ವಹಣೆ ನಿಮ್ಮ ಕೈಯಲ್ಲಿದೆ ಎಂದು ತಿಳಿಸಿದ್ದಾರೆ.

<><><><>

ನಾಳೆ ಮೊದಲನೇ ಆಷಾಢ ಶುಕ್ರವಾರ. ಆಷಾಢ ಮಾಸದಲ್ಲಿ ಮೈಸೂರಿನ ಚಾಮುಂಡೇಶ್ವರಿ ದೇವಿಯ ದರ್ಶನ ಪಡೆಯಲು ಚಾಮುಂಡಿಬೆಟ್ಟಕ್ಕೆ ಸಾಗರೋಪಾದಿಯಲ್ಲಿ ಭಕ್ತರು ಆಗಮಿಸುವ ಹಿನ್ನೆಲೆಯಲ್ಲಿ ಸುರಕ್ಷತೆಗಾಗಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ.

ಲಲಿತಾದ್ರಿಪುರ, ಉತ್ತನಹಳ್ಳಿ, ತಾವರೆಕಟ್ಟೆ ಮಾರ್ಗದಿಂದ ಖಾಸಗಿ ವಾಹನಗಳ ಪ್ರವೇಶ ಇರುವುದಿಲ್ಲ ಎಂದು ನಗರ ಪೊಲೀಸ್ ಆಯುಕ್ತ ಸೀಮಾಲಾಟ್ಕರ್ ತಿಳಿಸಿದ್ದಾರೆ.

ಆಷಾಢಮಾಸದ ಶುಕ್ರವಾರ, ಶನಿವಾರ, ಭಾನುವಾರ ಮತ್ತು ವರ್ಧಂತಿ ದಿನಗಳಂದು ಭಕ್ತರು ಹೆಚ್ಚಾಗಿ ಆಗಮಿಸುವ ಕಾರಣ ಬೆಟ್ಟಕ್ಕೆ ವಾಹನಗಳ ಪ್ರವೇಶ ನಿರ್ಬಂಧ ಸೇರಿ ಸಣ್ಣ ಲೋಪವಾಗದಂತೆ ರಕ್ಷಣೆ ನೀಡಲಾಗುವುದು ಎಂದು ಅವರು ಹೇಳಿದ್ದಾರೆ.

ಬೆಟ್ಟದ ಮೇಲೆ ದರ್ಶನದ ಟಿಕೆಟ್ ವಿತರಣೆ ಇರುವುದಿಲ್ಲ. ಲಲಿತಮಹಲ್ ಮೈದಾನದಲ್ಲೇ ೩೦೦ ರೂಪಾಯಿ ಮತ್ತು ೨ ಸಾವಿರ ರೂಪಾಯಿ ದರ್ಶನದ ಟಿಕೆಟ್‌ಗಳ ಕೌಂಟರ್ ತೆರೆಯಲಾಗುವುದು.

ಭಕ್ತರು ತಮ್ಮ ವಾಹನಗಳನ್ನು ಲಲಿತಮಹಲ್ ಪ್ಯಾಲೇಸ್ ಮುಂಭಾಗದ ಮೈದಾನದಲ್ಲಿ ನಿಲುಗಡೆ ಮಾಡಬೇಕು. ಮೆಟ್ಟಿಲು ಮೂಲಕ ಬೆಟ್ಟಕ್ಕೆ ತೆರಳುವ ಭಕ್ತರಿಗೆ ಮುಂಜಾನೆ ೫ ಗಂಟೆಯಿಂದ ಪ್ರವೇಶ ಕಲ್ಪಿಸಲಾಗುವುದು ಎಂದು ಸೀಮಾಲಾಟ್ಕರ್ ಮಾಹಿತಿ ನೀಡಿದ್ದಾರೆ.

<><><><>

ಎತ್ತಿನಹೊಳೆ ಯೋಜನೆ ಹಿನ್ನೆಲೆಯಲ್ಲಿ ತುಮಕೂರು ಜಿಲ್ಲೆಯ ಗುಬ್ಬಿ ತಾಲೂಕಿನ ಚೇಳೂರು ಬಳಿ ನಿರ್ಮಿಸಲಾಗಿರುವ ಅತ್ಯಾಧುನಿಕ ತಂತ್ರಜ್ಞಾನದ ಬೃಹತ್ ಮೇಲ್ಗಾಲುವೆ ಕಾಮಗಾರಿಯನ್ನು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ಪರಿವೀಕ್ಷಣೆ ಮಾಡಿದರು.

ವಿಶ್ವದಲ್ಲೇ ೪೦ ಮೀಟರ್ ಅತಿ ಎತ್ತರದ ಹಾಗೂ ಏಷ್ಯಾದಲ್ಲೇ ಅತಿ ಉದ್ದದ ೧೦.೪೭ ಕಿಲೋಮೀಟರ್ ಮೇಲ್ಗಾಲುವೆ ಇದಾಗಿದೆ. ಮಣ್ಣಿನ ಸಾಮರ್ಥ್ಯಕ್ಕೆ ತಕ್ಕಂತೆ ಓಪನ್ ಹಾಗೂ ಪೈಲ್ ವಿನ್ಯಾಸಗಳ ಮೂಲಕ ಅಡಿಪಾಯ ನಿರ್ಮಿಸಲಾಗಿದೆ. ಒಟ್ಟು ೪೦ ಮೀ. ಎತ್ತರದಲ್ಲಿ ಬೃಹತ್ ಮೇಲ್ಗಾಲುವೆ ಮೂಲಕ ನೀರು ಹರಿಯಲಿದೆ.

ವಿಶೇಷ ಮಾದರಿಯ ಎಙಟಿಣ ಖಿಡಿಚಿಣಟಜಟಿಣ ಒಜಣಡಿಣಜಿಟಿಂಧಿ ಯನ್ನು ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯಿಂದ ಪರಿಶೀಲಿಸಿ ಕಾಮಗಾರಿ ಮಾಡಲಾಗಿದೆ. ಅತ್ಯಂತ ಕನಿಷ್ಠ ಅವಧಿಯಲ್ಲಿ ಎತ್ತರ ಮಟ್ಟದಲ್ಲಿ ಮಿತ ಕಾರ್ಮಿಕರ ಬಳಕೆ ಹಾಗೂ ಸುರಕ್ಷತೆಗೆ ಆದ್ಯತೆ ಕೊಟ್ಟು ಕಾಮಗಾರಿ ಪೂರ್ಣಗೊಳಿಸಲಾಗಿದೆ.

ಈ ವೇಳೆ ಮಾತನಾಡಿದ ಶಿವಕುಮಾರ್, ‘ಈ ಯೋಜನೆ ಮೂಲಕ ವಿಶ್ವೇಶ್ವರಯ್ಯ ಜಲ ನಿಗಮದ ಅಧಿಕಾರಿಗಳು ಅವರ ಬದುಕಿನಲ್ಲೇ ಒಂದು ಇತಿಹಾಸ ಬರೆದಿದ್ದಾರೆ. ಈ ಯೋಜನೆಯನ್ನು ನಾವು ದೇಶಕ್ಕೆ ಮಾದರಿಯಾಗಿ ಪರಿಚಯಿಸಬೇಕು ಎಂದು ತಿಳಿಸಿದ್ದಾರೆ.

<><><>

ಬೆಂಗಳೂರಿನ ಭಾರತೀಯ ವಾಯುಪಡೆ ಸ್ಥಳೀಯವಾಗಿ ಅಭಿವೃದ್ಧಿಪಡಿಸಿದ ರಾಡರ್ ಸಿಮ್ಯುಲೇಟರ್‌ಅನ್ನು ದಮನ್‌ನಲ್ಲಿಂದು ಭಾರತೀಯ ಕರಾವಳಿ ಕಾವಲುಪಡೆಗೆ ಹಸ್ತಾಂತರಿಸಿದೆ. ಬೆಂಗಳೂರಿನ ವಾಯುಪಡೆಯ ಕಮಾಂಡೆಂಟ್ ಏರ್‌ವೈಸ್ ಮಾರ್ಷಲ್ ಆರ್. ಗುರುಹರಿ ಹಾಗೂ ಗ್ರೂಪ್ ಕ್ಯಾಪ್ಟನ್ ಸತ್ಯೇಂದರ್ ಸಿಂಗ್ ಹಸ್ತಾಂತರಿಸಿದರು.

ಈ ತಂತ್ರಜ್ಞಾನವನ್ನು ಭಾರತೀಯ ವಾಯುಪಡೆಯ ಪ್ರಮುಖ ಸಾಫ್ಟ್‌ವೇರ್ ಸಂಶೋಧನೆ ಮತ್ತು ಅಭಿವೃದ್ಧಿ ಘಟಕ ಅಭಿವೃದ್ಧಿಪಡಿಸಿದೆ.

ಆರ್‌ಎಡಿಎಸ್‌ಐಎಂ (ರ್‍ಯಾಡ್ಸಿಮ್) ವಾಸ್ತವಿಕ ರಾಡರ್ ಮತ್ತು ವಾಯುಸಂಚಾರ ನಿಯಂತ್ರಣ ಪರಿಸರಗಳನ್ನು ಪುನರಾವರ್ತಿಸಲು ವಿನ್ಯಾಸಗೊಳಿಸಲಾದ ಸಿಮ್ಯುಲೇಷನ್ ವ್ಯವಸ್ಥೆಯಾಗಿದೆ. ಇದು ಸಂಕೀರ್ಣ ವಾಯುಪ್ರದೇಶ ಮತ್ತು ಸಾಗರಗಳಲ್ಲಿ ಕಾರ್ಯಾಚರಣೆಯನ್ನು ಬಲಪಡಿಸಲಿದೆ.

<><><>